ದಿಃ 20.02.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎ.ಎನ್.ಎಸ್ ವಕೀಲರಿಂದ ,**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿದ್ದು, ಅದನ್ನು ನಾನೇ ಹೇಳಿ ಬರೆಸಿದ್ದೇನೆ ಹಾಗೂ ಪ್ರಮಾಣ ಪತ್ರಕ್ಕೆ ನಾನೇ ಸಹಿ ಮಾಡಿರುತ್ತೇನೆ.

ಈ ದಿವಸ ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರು ಪಡಿಸುತ್ತಿದ್ದೇನೆ.

1. ದಿಃ 01-02-2023 ರ ದಿನಾಂಕದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾಗೆ ಸೇರಿದ ರೂ. 92,000/- ಗಳ ಒಂದು ಚೆಕ್ ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-01 ಎಂದು ಗುರುತಿಸಲಾಯಿತು.
2. ಬ್ಯಾಂಕಿನವರು ನೀಡಿರುವ ಹಿಂಬರಹವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-02 ಎಂದು ಗುರುತಿಸಲಾಯಿತು.
3. ಲೀಗಲ್ ನೋಟಿಸ್ ನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-03 ಎಂದು ಗುರುತಿಸಲಾಯಿತು.
4. ಆರ್.ಪಿ.ಐ.ಡಿ ರಶೀದಿಯನ್ನು ಹಾಜರು ಪಡಿಸಿದ್ದು ಅದನ್ನು ಒಟ್ಟಾಗಿ ನಿಪಿ-04 ಎಂದು ಗುರುತಿಸಲಾಯಿತು.
5. ವಾಪಸ್ಸು ಬಂದ ಆರ್.ಪಿ.ಐ.ಡಿ ಕವರ್ ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-05 ಎಂದು ಗುರುತಿಸಲಾಯಿತು ಮತ್ತು ಸದರಿ ಆರ್.ಪಿ.ಐ.ಡಿ ಕವರ್ ಅನ್ನು ತೆರೆದ ನ್ಯಾಯಾಲಯದಲ್ಲಿ ತೆರೆಯಲಾಗಿ ಅದರಲ್ಲಿರುವ ದಾಖಲೆಯನ್ನು ನಿಪಿ-05(ಎ) ಎಂದು ಗುರುತಿಸಲಾಯಿತು.

**ಪ್ರತಿವಾದಿಗಳು ಏಕಾಪಕ್ಷೀಯವಾಗಿರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

*(ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.*

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

*(ರಾಘವೇಂದ್ರ. ಡಿ.)*

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,

ಭದ್ರಾವತಿ